# ನೀಟ್‌ನಲ್ಲಿ ಉತ್ತಮ ಫಲಿತಾಂಶದ ನಿರೀಕ್ಷೆ

## ಪಾಲಕರು ನಮ್ಮ ಮೇಲಿಟ್ಟಿರುವ ನಂಬಿಕೆಯನ್ನು ಗಟ್ಟಿಗೊಳಿಸುತ್ತೇವೆ: ಚೇರಮನ್ ಕೌಲಗಿ ವಿಶ್ವಾಸ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಈ ಬಾರಿಯೂ ನೀಟ್ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶದ ನಿರೀಕ್ಷೆಯಲ್ಲಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ರ್‍ಯಾಂಕ್‌ಗಳನ್ನು ನೀಡುವ ಮೂಲಕ ಪಾಲಕರು ನಮ್ಮ ಮೇಲಿಟ್ಟಿರುವ ನಂಬಿಕೆಯನ್ನು ಗಟ್ಟಿಗೊಳಿಸುತ್ತೇವೆ ಎಂದು ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಚೇರಮನ್ ಬಸವರಾಜ ಕೌಲಗಿ ಭರವಸೆ ನೀಡಿದರು.

ಕನ್ನಡಪ್ರಭದೊಂದಿಗೆ ಮಾತನಾಡಿದ ಅವರು, ಎಕ್ಸಲಂಟ್ ವಿಜ್ಞಾನ ಪದವಿ ಪೂರ್ವ ಕಾಲೇಜು ಪ್ರಾರಂಭಗೊಂಡಾಗಿನಿಂದಲೂ ಸಾಧನೆಯ ಕೀರ್ತಿ ಪತಾಕೆ ಹಾರಿಸುತ್ತಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಮಾಡುವಲ್ಲಿ ಹೆಸರಾಗಿರುವ ನಮ್ಮ ಸಂಸ್ಥೆಯು ಮಕ್ಕಳಿಗೆ ಬೇಕಾಗಿರುವ ಶೈಕ್ಷಣಿಕ ಮೂಲಭೂತವಾದ ಅಂಶಗಳನ್ನು ತಿಳಿಸಿಕೊಟ್ಟು ಅವರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸಲಾಗುತ್ತದೆ ಎಂದರು.

ಶ್ರೀಧರ ದೊಡಮನಿ ವಿದ್ಯಾರ್ಥಿಯು ನೀಟ್ ಹಾಗೂ ಕೆ-ಸಿಇಟಿ ನಲ್ಲಿ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದು ಸಾಧನೆಯ ಹಾದಿಯಲ್ಲಿ ಮೊದಲ ಹೆಜ್ಜೆ ಗಟ್ಟಿಯಾಗಿ ಊರಿದ್ದನು. ನಂತರದ ಬ್ಯಾಚ್‌ಗಳಲ್ಲಿ ಬಂದಂತ ಅತ್ಯುತ್ತಮ ಫಲಿತಾಂಶವು ಜನತೆಗೆ ಎಕ್ಸಲಂಟ್ ಮೇಲಿದ್ದ ನಂಬಿಕೆಯನ್ನು ಇನ್ನಷ್ಟು ಗಟ್ಟಿಗೊಳಿಸಿತು. ಕಳೆದ ಬಾರಿ ವಿದ್ಯಾರ್ಥಿ ಅಭಿಷೇಕ ಬಂಡಾರಕವಟೆ ನೀಟ್ ಪರೀಕ್ಷೆಯಲ್ಲಿ 700 ಅಂಕಗಳನ್ನು ಪಡೆದುಕೊಂಡು ಕಾಲೇಜಿಗೆ ಮತ್ತೊಂದು ಗರಿ ಸೇರುವಂತೆ ಮಾಡಿದ್ದ. ನಂತರದ ಫಲಿತಾಂಶದಲ್ಲಿ ಅಶ್ವಿನಿ ಯಕ್ಕುಂಡಿ ಕೆಸಿಇಟಿ ಅಗ್ರಿಯಲ್ಲಿ ರಾಜ್ಯಕ್ಕೆ 3ನೇ ರ್‍ಯಾಂಕ್ ಹಾಗೂ ವೆಟರ್‌ನರಿಯಲ್ಲಿ ರಾಜ್ಯಕ್ಕೆ 9ನೇ ರ್‍ಯಾಂಕ್ ಪಡೆದುಕೊಂಡಿದ್ದು, ಕಾವ್ಯಾ ಶಿಂಧೆ ಅಗ್ರಿಯಲ್ಲಿ ರಾಜ್ಯಕ್ಕೆ 5ನೇ ರ್‍ಯಾಂಕ್ ಹಾಗೂ ವೆಟರ್‌ನರಿಯಲ್ಲಿ ರಾಜ್ಯಕ್ಕೆ 10ನೇ ರ್‍ಯಾಂಕ್ ಪಡೆದುಕೊಂಡು ಸಾಧನೆಗೈದಿದ್ದರು. ಅಲ್ಲದೆ 102 ಎಂಬಿಬಿಎಸ್, 79 ಬಿಎಎಂಎಸ್, 14 ಬಿಡಿಎಸ್ ಸೇರಿದಂತೆ 195 ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಪಡೆದು ಸೀಟು ಗಿಟ್ಟಿಸಿಕೊಂಡು ವೈದ್ಯರಾಗುವ ಕನಸನ್ನು ಈಡೇರಿಸಿಕೊಂಡಿದ್ದಾರೆ ಎಂದು ಸಂತಷ ವ್ಯಕ್ತಪಡಿಸಿದರು. ಈ ಬಾರಿಯ ನೀಟ್ ಪರೀಕ್ಷೆಯನ್ನು ಮುಗಿಸಿದ ವಿದ್ಯಾರ್ಥಿಗಳ ಕೀ ಉತ್ತರಗಳಿಗೆ ಅನುಗುಣವಾಗಿ ನೋಡಿದರೇ ಚನ್ನವೀರೇಶ ಕುಂಬಾರ 700, ಸಲ್ಮಾನ್ ಗೋಡಿಹಾಳ 685, ಸಾಗರ ಬನಹಟ್ಟಿ 682, ಗಂಗಾಧರ ಮುತ್ತಗಿ 680, ಅನುಷ್ಕಾ 662, ಸುಮಿತ.ಎ.ಪಿ 657, ಬಸವನಗೌಡ ಬೈರವಾಡಗಿ 645, ಪ್ರತೀಕ ಚವ್ಹಾಣ 640, ಸ್ವಾತಿ ಮಲೆದ 600 ಅಂಕಗಳನ್ನು ಪಡೆದುಕೊಳ್ಳುವ ನಿರೀಕ್ಷೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಉತ್ತರ ಕರ್ನಾಟಕ ಭಾಗದಲ್ಲೇ ಹೆಸರಾದ ನಮ್ಮ ಸಂಸ್ಥೆಯಲ್ಲಿ ನುರಿತ ಉಪನ್ಯಾಸಕ ಬಳಗವಿದ್ದು, ಮಕ್ಕಳ ಭವಿಷ್ಯ ನಿರ್ಮಾಣಕ್ಕೆ ಬೇಕಾಗುವ ಶೈಕ್ಷಣಿಕ ವಾತಾವರಣವಿದೆ. ಮಗುವಿನ ಕನಸಿಗೆ ಕೈ ಜೋಡಿಸಿ ನಡೆದಾಗ ಉತ್ತಮ ಭವಿಷ್ಯ ಮಗುವಿನದಾಗಿರುತ್ತದೆ ಎನ್ನುವುದನ್ನು ನಂಬಿರುವ ನಮ್ಮ ಸಂಸ್ಥೆ ನೀಟ್, ಜೆಇಇ, ಕೆ-ಸಿಇಟಿ, ಎನ್‌ಡಿಎಗೆ ಬೇಕಾಗುವ ತರಬೇತಿ ನೀಡುತ್ತಿದೆ.

• **ಬಸವರಾಜ ಕೌಲಗಿ**
ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಚೇರಮನ್.

### ಮತ್ತೊಂದು ಮೈಲಿಗಲ್ಲು ನೆಡಲು ಸಜ್ಜು

ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಯು ಸೈನಿಕ, ನವೋದಯ, ಕಿತ್ತೂರು ಶಾಲೆಗಳ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದಿಂದ ಪ್ರಾರಂಭಗೊಂಡು ಇಂದು ಉತ್ತರ ಕರ್ನಾಟಕ ಭಾಗದ ಹೆಮ್ಮೆಯ ಶಿಕ್ಷಣ ಸಂಸ್ಥೆಯಾಗಿ ನಿಂತಿದೆ. ತನ್ನ ಪರಿಣಾಮಕಾರಿ ಬೋಧನೆ ಹಾಗೂ ಅತ್ಯುತ್ತಮವಾದ ಫಲಿತಾಂಶದ ಮೂಲಕ ಮನೆ ಮಾತಾಗಿರುವ ಎಕ್ಸಲಂಟ್ ಸಂಸ್ಥೆ ಇಂದು ನೀಟ್ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದುಕೊಂಡು ಮತ್ತೊಂದು ಮೈಲಿಗಲ್ಲು ನೆಡಲು ಸಜ್ಜಾಗಿದೆ. ಈ ಬಾರಿ ನೀಟ್ ಪರೀಕ್ಷೆಯ ನಂತರದಲ್ಲಿ ವಿದ್ಯಾರ್ಥಿಗಳು ಕೀ ಉತ್ತರವನ್ನು ಪರಿಶೀಲಿಕೊಂಡಿದ್ದು, ನಿರೀಕ್ಷೆಗಳು ಗರಿಗೆದರಿವೆ.

# ಇಂದು ಸಂಗಮೇಶಗೆ ನೇಗಿಲ ಯೋಗಿ ಪ್ರಶಸ್ತಿ ಪ್ರದಾನ



• **ಕನ್ನಡಪ್ರಭ ವಾರ್ತೆ** ಕೊಲ್ಹಾರ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೊಡಮಾಡುವ ನೇಗಿಲು ಯೋಗಿ ಪ್ರಶಸ್ತಿಗೆ ತಾಲೂಕಿನ ಯುವ ಸಾವಯುವ ಕೃಷಿಕ ಹಾಗೂ ಪ್ರಗತಿಪರ ರೈತ ಸಂಗಮೇಶ ಬಿಜಾಪುರ ಆಯ್ಕೆಯಾಗಿದ್ದಾರೆ. ಮೇ 8 ರಂದು ವಿಜಯಪುರ ದರ್ಬಾರ್ ಹೈಸ್ಕೂಲ್ ಮೈದಾನದಲ್ಲಿ ಜರುಗಲಿರುವ ರಾಜ್ಯಮಟ್ಟದ 4ನೇ ಬೃಹತ್ ರೈತ ಜಾಗೃತಿ ಸಮಾವೇಶದಲ್ಲಿ ನೇಗಿಲ ಯೋಗಿ ಪ್ರಶಸ್ತಿಯನ್ನು ರಾಜ್ಯ ರೈತ ಸಂಘದ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ, ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ್ ಕುಬಕಡ್ಡಿ ಸೇರಿದಂತೆ ನಾಡಿನ ಹರ, ಗುರು, ಚರ ಮೂರ್ತಿಗಳು ಕೊಡಮಾಡಿಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.





## ಪ್ರತಿಭಾ ಪುರಸ್ಕಾರಕ್ಕೆ ನೋಂದಾಯಿಸಿ: ಶಿವರಾಜ ಕೆಂಗನಾಳ ಮನವಿ

• **ಕನ್ನಡಪ್ರಭ ವಾರ್ತೆ** ತಾಂಬಾ:

ವಿಜಯಪುರ ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ ಜಿಲ್ಲೆಯ ವೀರಶೈವ ಲಿಂಗಾಯತ ಪಂಚಮಸಾಲಿ ಸಮುದಾಯದ ಜಿಲ್ಲಾ ಘಟಕದ ವತಿಯಿಂದ ಮೇ 24 ರಂದು ವಿಜಯಪುರ ನಗರದ ಕಿತ್ತೂರ ರಾಣಿ ಚನ್ನಮ್ಮ ಮಂಗಲ ಕಾರ್ಯಾಲಯದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪಂಚಮಸಾಲಿ ಸಮಿತಿಯ ನಿರ್ದೇಶಕ ಶಿವರಾಜ ಕೆಂಗನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಾರ್ಯಕ್ರಮವು ಕಿತ್ತೂರಾಣಿ ಚನ್ನಮ್ಮ ವಿಜಯೋತ್ಸವ ಹಾಗೂ ಉತ್ಸವ ಸಮಿತಿ ವಿಜಯಪುರ ವತಿಯಿಂದ ಹಮ್ಮಿಕೊಳ್ಳಲಾಗಿದೆ. 2025-26ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಪರೀಕ್ಷೆಯಲ್ಲಿ ಶೇ.90 ಕ್ಕಿಂತ ಹೆಚ್ಚಿನ ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳು ಇಂಡಿ, ಚಡಚಣ, ಸಿಂದಗಿ ಹಾಗೂ ಆಲಮೇಲ ಭಾಗದ ವಿದ್ಯಾರ್ಥಿಗಳು ಮೊ.9986391599 ಸಂಪರ್ಕಿಸಿ ನೋಂದಾಯಿಸಿಕೊಳ್ಳಬೇಕು. ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಶೇ.90ಕ್ಕಿಂತ ಹೆಚ್ಚು ಹಾಗೂ ಕೇಂದ್ರೀಯ ವಿದ್ಯಾಲಯ ಮತ್ತು ಸಿಬಿಎಸ್‌ಇಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

# ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ, ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

### ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.

> **ಗೌರವಗಳು :**
> **ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.**

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರದರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಗರಿಷ್ಠ 40°C | ಕನಿಷ್ಠ 25°C

## ಸುದ್ದಿ ಸಿಂಚನ

### 11ರಿಂದ ಉಚಿತ ತಪಾಸಣೆ ಶಿಬಿರ

**ವಿಜಯಪುರ:** ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಕಾಯಚಿಕಿತ್ಸೆ ವಿಭಾಗದಿಂದ ಅಲರ್ಜಿ, ಅಸ್ತಮಾ, ಕೆಮ್ಮು, ದಮ್ಮು ಹಾಗೂ ದೀರ್ಘಕಾಲದ ಉಸಿರಾಟ ಇಂತಹ ಸಮಸ್ಯೆ ಕುರಿತು ಉಚಿತ ತಪಾಸಣೆ ಶಿಬಿರ ಮೇ 11 ರಿಂದ ಮೇ 14 ರವರೆಗೆ ನಡೆಯಲಿದೆ. ಸಮಸ್ಯೆ ಎದುರಿಸುತ್ತಿರುವ ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬಿ.ಎಲ್.ಡಿ.ಇ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಹಿತಿಗಾಗಿ ಮೊ.9513397413 ಸಂಪರ್ಕಿಸಿ.

### ಸಾಹಿತಿ ಕುಲಕರ್ಣಿ ಅಮೃತ ನಮನ ಕಾರ್ಯಕ್ರಮ

**ವಿಜಯಪುರ:** ಕರ್ನಾಟಕ ಗಡಿಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಗಡಿನಾಡು ಚೇತನ ಪ್ರಶಸ್ತಿ ಪುರಸ್ಕೃತ



ಹಿರಿಯ ಸಾಹಿತಿ ಹಾಗೂ ಸಮಾಜ ಚಿಂತಕ ಎನ್.ಆರ್.ಕುಲಕರ್ಣಿ ಅವರಿಗೆ ಅಮೃತ ನಮನ ಸಮಾರಂಭವನ್ನು ಮೇ 10ರಂದು ಸಂಜೆ 5 ಗಂಟೆಗೆ ನಗರದ ಅನಂತಲಕ್ಷ್ಮಿ ಮಂಗಲ ಕಾರ್ಯಾಲಯದಲ್ಲಿ ಆಚರಿಸಲು ಅಮೃತಮಹೋತ್ಸವ ಸಮಿತಿ ನಿರ್ಧರಿಸಿದೆ. ಸಮಾರಂಭದಲ್ಲಿ ಗ್ರಂಥ ಬಿಡುಗಡೆ, ತುಲಾಭಾರ ಹಾಗೂ ಅಮೃತ ನಮನಗಳು ನಡೆಯಲಿವೆ. ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭೆ ಅಧ್ಯಕ್ಷ ವಿ.ಸಿ.ನಾಗಠಾಣ ಅಧ್ಯಕ್ಷತೆ ವಹಿಸಲಿದ್ದು, ಎನ್.ಆರ್. ಕುಲಕರ್ಣಿಯವರ ರಚಿತ ಹಣ್ಣೆಲೆಯ ಹಸಿರು ನೆನಪುಗಳು ಗ್ರಂಥವನ್ನು ಡಾ.ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ.ಎಂ.ಎಸ್.ಮದಭಾವಿ ಗ್ರಂಥ ಬಿಡುಗಡೆ ಗೊಳಿಸಲಿದ್ದಾರೆ.

### ಮೇ, ಜೂನ್ ತಿಂಗಳ ಪಡಿತರ ಅಕ್ಕಿ ಪಡೆದುಕೊಳ್ಳಿ: ಜಿಲ್ಲಾಧಿಕಾರಿ ಮನವಿ

**ವಿಜಯಪುರ:** ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆಯಡಿ 2026ನೇ ಮೇ ಹಾಗೂ ಜೂನ್ ತಿಂಗಳಿಗೆ ಸಂಬಂಧಿಸಿದ ಪಡಿತರ ಅಕ್ಕಿಯನ್ನು ಮೇ ತಿಂಗಳಿನಲ್ಲಿಯೇ ವಿತರಿಸಲು ಜಿಲ್ಲೆಯ ಎಲ್ಲ ನ್ಯಾಯಬೆಲೆ ಅಂಗಡಿಗಳಿಗೆ ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ ತಿಳಿಸಿದ್ದಾರೆ. ಅಂತ್ಯೋದಯ ಅನ್ನಯೋಜನೆ ಪ್ರತಿ ಪಡಿತರ ಚೀಟಿಗೆ ಎರಡೂ ತಿಂಗಳ ಪಡಿತರ ಅಕ್ಕಿ ಒಟ್ಟು



70 ಕೆಜಿ ಹಾಗೂ ಆದ್ಯತಾ (ಬಿಪಿಎಲ್) ಪಡಿತರ ಚೀಟಿಗೆ ಪ್ರತಿ ತಿಂಗಳು ಪ್ರತಿ ಸದಸ್ಯರಿಗೆ 5 ಕೆಜಿಯಂತೆ ಒಟ್ಟು 10 ಕೆಜಿ ಅಕ್ಕಿಯನ್ನು ಕಡ್ಡಾಯವಾಗಿ ಎರಡು ಪ್ರತ್ಯೇಕ ಬಯೋಮೆಟ್ರಿಕ್ ನೀಡುವ ಮೂಲಕ ಪಡಿತರ ಚೀಟಿದಾರರು ಪಡೆಯಬಹುದಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯ ಮೇ ಹಾಗೂ ಜೂನ್ ತಿಂಗಳ ಅಕ್ಕಿಯನ್ನು 2026ನೇ ಜೂನ್ ತಿಂಗಳಲ್ಲಿ ವಿತರಣೆ ಮಾಡಲಾಗುವುದು. ಯಾವುದೇ ಕಾರಣಕ್ಕೂ ಸರ್ಕಾರವು ನೀಡುತ್ತಿರುವ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಿಕೊಳ್ಳದಿರಲು ಸೂಚಿಸಿದೆ. ಒಂದು ವೇಳೆ ಮಾರಾಟ ಮಾಡುವುದು ಕಂಡುಬಂದರೆ ಅಂತಹ ಬಿಪಿಎಲ್ ಕಾರ್ಡುಗಳನ್ನು ರದ್ದು ಪಡಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

### ಜಲಾಶಯ ಮಟ್ಟ

ಆಲಮಟ್ಟಿ

- ಗರಿಷ್ಠ ಮಟ್ಟ..................519.60ಮೀ.
- ಇಂದಿನ ಮಟ್ಟ.................509.49ಮೀ.
- ಒಳಹರಿವು......................ಇಲ್ಲ
- ಹೊರಹರಿವು..................1,597ಕ್ಯು





ಕೇಂದ್ರ ಸರ್ಕಾರದ ಬಿಎಸ್‌ಎನ್‌ಎಲ್ ಕಚೇರಿಯಲ್ಲಿ ವೈಯಕ್ತಿಕ ಹುಟ್ಟುಹಬ್ಬ ಆಚರಣೆ ಮಾಡಿದ್ದಲ್ಲದೆ ಡಾ.ಬಿ.ಆರ್.ಅಂಬೇಡ್ಕರ ರವರಿಗೆ ಅಪಮಾನ ಮಾಡಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳುಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರಿಗೆ ರೈತಪರ ಸಂಘಟನೆ ಹಾಗೂ ದಲಿತ ಸಂಘಟನೆ, ಆಮ್ ಆದ್ಮಿ ಪಕ್ಷದಿಂದ ಮನವಿ ಸಲ್ಲಿಸಲಾಯಿತು.

# ಅಧಿಕಾರಿ ವಿರುದ್ಧ ಕ್ರಮಕ್ಕೆ ಆಗ್ರಹ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕೇಂದ್ರ ಸರ್ಕಾರದ ಬಿಎಸ್‌ಎನ್‌ಎಲ್ ಕಚೇರಿಯಲ್ಲಿ ವೈಯಕ್ತಿಕ ಹುಟ್ಟುಹಬ್ಬ ಆಚರಣೆ ಮಾಡಿದ್ದಲ್ಲದೆ ಡಾ.ಬಿ.ಆರ್.ಅಂಬೇಡ್ಕರ ರವರಿಗೆ ಅಪಮಾನ ಮಾಡಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳುಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿ ಡಾ.ಆನಂದ.ಕೆ ಹಾಗೂ ಬಿಎಸ್‌ಎನ್‌ಎಲ್ ಮುಖ್ಯ ಪ್ರಧಾನ ವ್ಯವಸ್ಥಾಪಕರಿಗೆ ರೈತಪರ ಸಂಘಟನೆ ಹಾಗೂ ದಲಿತ ಸಂಘಟನೆ, ಆಮ್ ಆದ್ಮಿ ಪಕ್ಷದಿಂದ ಮನವಿ ಸಲ್ಲಿಸಲಾಯಿತು.

ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹಾಗೂ ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಭೋಗೇಶ ಸೊಲಾಪುರ ಮಾತನಾಡಿ, ಕೇಂದ್ರ ಸರ್ಕಾರದ ಅಧೀನದಲ್ಲಿರುವ ವಿಜಯಪುರ ನಗರದ ಬಿಎಸ್‌ಎನ್‌ಎಲ್ ಕಚೇರಿಯಲ್ಲಿ ಡೆಪ್ಯೂಟಿ ಜನರಲ್ ಮ್ಯಾನೇಜರ್ ಅವರು ತಮ್ಮ ಹುಟ್ಟು ಹಬ್ಬವನ್ನು ಸರ್ಕಾರಿ ಕಚೇರಿಯಲ್ಲಿ ಆಚರಿಸಿ ಸರ್ಕಾರದ ನಿಯಮಾವಳಿಗಳನ್ನು ಗಾಳಿಗೆ ತೂರಿದ್ದಾರೆ. ಅಲ್ಲದೇ, ಡಾ.ಬಿ.ಆರ್. ಅಂಬೇಡ್ಕರ ಜಯಂತಿಯಂದು ಡಾ.ಬಿ.ಆರ್. ಅಂಬೇಡ್ಕರ ಭಾವಚಿತ್ರವನ್ನು ಕಚೇರಿಯ ಫುಟ್ ಪಾತ ಬಳಿ ಇರಿಸಿ ಪೂಜೆ ಮಾಡಿ ಅಂಬೇಡ್ಕರ್ ಅವರಿಗೆ ಅವಮಾನ ಎಸಗಿದ್ದಾರೆ ಎಂದು ಆರೋಪಿಸಿದರು. ಈ ಕೂಡಲೇ ತಪ್ಪಿತಸ್ಥರ ಮೇಲೆ ಕಾನೂನು ರೀತಿ ಕ್ರಮ ಜರುಗಿಸಿ ಸೇವೆಯಿಂದ ಅಮಾನತುಗೊಳಿಸಬೇಕೆಂದು ಆಗ್ರಹಿಸಿದರು. ಈ ಸಂಧರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಸಿದ್ದಾಪೂರ, ದಲಿತ ಸಂಘರ್ಷ ಸಮಿತಿ ಮುಖಂಡ ಬಸವರಾಜ ಭೈರವಾಡಗಿ, ವಾಲ್ಮೀಕಿ ಸಮಾಜದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಟಗಿ, ಕಿರಣ ಮೇಲಿನಕೇರಿ ಮುಂತಾದವರು ಇದ್ದರು.



## ಸೇವಾದಳ ಜಿಲ್ಲಾ ಕಚೇರಿಯಲ್ಲಿ ಡಾ.ಹರ್ಡೀಕರ ಜಯಂತಿ

**ವಿಜಯಪುರ:** ಭಾರತ ಸೇವಾದಳ ಸಂಸ್ಥಾಪಕ ಡಾ.ನಾರಾಯಣ ಸುಬ್ಬಾರಾವ ಹರ್ಡೀಕರರವರ ಜಯಂತ್ಯುತ್ಸವವನ್ನು ಭಾರತ ಸೇವಾದಳ ಜಿಲ್ಲಾ ಮತ್ತು ತಾಲೂಕು ಸಮಿತಿ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.24 ವಿಜಯಪುರ ಇವರುಗಳ ಸಹಯೋಗದಲ್ಲಿ ಭಾರತ ಸೇವಾದಳ ಜಿಲ್ಲಾ ಕಚೇರಿಯಲ್ಲಿ ಆಚರಿಸಲಾಯಿತು. ಈ ವೇಳೆ ಭಾರತ ಸೇವಾದಳ ವಲಯ ಸಂಘಟಕ ನಾಗೇಶ ಡೋಣೂರ, ಸಂಪನ್ಮೂಲ ವ್ಯಕ್ತಿ ಎಸ್.ಎಲ್. ರಾಠೋಡ, ಭಾರತ ಸೇವಾದಳದ ಜಿಲ್ಲಾ ಮತ್ತು ತಾಲೂಕು ಸಮಿತಿ ಸದಸ್ಯರು, ಶಾಲಾ ಶಿಕ್ಷಕರು ಉಪಸ್ಥಿತರಿದ್ದರು.

# ಕೆರೆ ನಿರ್ಮಿಸ್ತಾರಾ? ಜವಳಿ ಪಾರ್ಕ್ ಮಾಡ್ತಾರಾ?

## ಜವಳಿ ಪಾರ್ಕ್ ನಿರ್ಮಾಣಕ್ಕೆ ಉತ್ಸಾಹ ತೋರಿದ ಸರ್ಕಾರ | ಕೆರೆ ನಿರ್ಮಿಸುವಂತೆ ಗ್ರಾಮಸ್ಥರ ಒತ್ತಾಯ

• **ಬಸವರಾಜ ನಂದಿಹಾಳ**
**ಕನ್ನಡಪ್ರಭ ವಾರ್ತೆ** ಬಸವನಬಾಗೇವಾಡಿ

ತಾಲೂಕಿನ ಮಣ್ಣೂರ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ನಾಗೂರ ಗ್ರಾಮದ ಸರ್ಕಾರಿ ಗೋಮಾಳದ 27 ಎಕರೆ ಜಮೀನಿನಲ್ಲಿ ಈಗಾಗಲೇ ರಸ್ತೆಗೆ ಹೊಂದಿಕೊಂಡಂತೆ 4 ಎಕರೆ ಸರ್ಕಾರಿ ಪ್ರೌಢಶಾಲೆ ಕಟ್ಟಡ ನಿರ್ಮಾಣಕ್ಕೆ, 3.20 ಎಕರೆ ದಲಿತ ಬಾಂಧವರ ಅಭಿವೃದ್ಧಿಗೆ ಮಂಜೂರು ಮಾಡಲಾಗಿದೆ. ಇನ್ನೂ 15 ಎಕರೆ ಜವಳಿ ಪಾರ್ಕ್‌ಗೆ ಪ್ರಸ್ತಾವನೆ ತಯಾರಿಸಲಾಗಿದೆ.

ಇಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡಲು ಗ್ರಾಮಸ್ಥರ ವಿರೋಧವಿದೆ. ಈ ಕುರಿತು ಈಗಾಗಲೇ ತಹಸೀಲ್ದಾರ, ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದೇವೆ ಎಂದು ಗ್ರಾಮಸ್ಥರು ಹೇಳುತ್ತಾರೆ. ಆದರೂ ಪಾರ್ಕ್ ನಿರ್ಮಾಣ ಪ್ರಸ್ತಾವ ಕೈಬಿಟ್ಟಿಲ್ಲ. ಜವಳಿ ಪಾರ್ಕ್ ನಿರ್ಮಾಣ ಕೈಬಿಟ್ಟು ಗ್ರಾಮಸ್ಥರಿಗೆ, ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಸರ್ಕಾರ ಕೆರೆ ನಿರ್ಮಾಣ ಮಾಡಬೇಕೆಂದು ಗ್ರಾಮಸ್ಥರು ಪಕ್ಷಾತೀತವಾಗಿ ಆಗ್ರಹಿಸುತ್ತಿದ್ದಾರೆ.

ಮಾಜಿ ಶಾಸಕ ಎಸ್.ಎಂ.ದೇಸಾಯಿ ಅವರ ಅವಧಿಯಲ್ಲಿ ಗ್ರಾಮಸ್ಥರಿಗೆ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಬಹುಹಳ್ಳಿ ಕುಡಿಯುವ ನೀರಿನ ಯೋಜನೆಯಡಿ ಅರೇಶಂಕರ ಕೆರೆಯಿಂದ ಗೋಮಾಳದಲ್ಲಿರುವ ಸರ್ಕಾರಿ ಬಾವಿಗೆ ನೀರು ಬರುವಂತೆ ಪೈಪ್ ಲೈನ್ ಮಾಡಲಾಗಿದೆ. ಗೋಮಾಳದಲ್ಲಿರುವ ಸರ್ಕಾರಿ ಬಾವಿಗೆ ಅರೇಶಂಕರ



ಕೆರೆಯಿಂದ ನೀರು ಬಂದು ಬೀಳುತ್ತದೆ. ಬಾವಿಯಿಂದ ಗ್ರಾಮಸ್ಥರಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ತೆರೆದ ಭಾವಿ ಇರುವುದರಿಂದಾಗಿ ಕಸಕಡ್ಡಿ ಬೀಳುತ್ತಿದೆ. ಅರೇಶಂಕರ ಕೆರೆ ನೀರು ಕುಡಿಯುವುದರಿಂದ ನಮಗೆ ರೋಗ-ರುಜಿನ ಬರುತ್ತವೆಂಬ ಕಾರಣಕ್ಕೆ ಈ ನೀರನ್ನು ಬಳಸಲು ಗ್ರಾಮಸ್ಥರು ಹಿಂದೇಟು ಹಾಕುತ್ತಿದ್ದಾರೆ.

**ಬೇಕಿದೆ ಹೆಚ್ಚುವರಿ ಅನುದಾನ:** ಗೋಮಾಳದಲ್ಲಿ ಮಾಜಿ ಶಾಸಕ ದಿ.ಬಿ.ಎಸ್.ಪಾಟೀಲ ಸಾಸನೂರ ಅವರ ಅವಧಿಯಲ್ಲಿ ಒಂದು ಬಾಂದಾರ್ ನಿರ್ಮಾಣವಾಗಿದೆ. ಇದು ಅಂತರ್ಜಲ ಹೆಚ್ಚಾಗಲು ಪೂರಕವಾಗಲಿದೆ. ಈ ಬೇಸಿಗೆಯಲ್ಲಿ ಗೋಮಾಳದಲ್ಲಿರುವ ಬಾಂದಾರಕ್ಕೆ ಮುಳವಾಡ ಏತನೀರಾವರಿ ಯೋಜನೆಯ ಟಕ್ಕಳಕಿ ಉಪಕಾಲುವೆಯಿಂದನೀರುಹರಿಸಿತುಂಬಿಸಲಾಗಿದೆ. ಬಾಂದಾರ ಇನ್ನಷ್ಟು ಎತ್ತರವಾಗುವ ಜೊತೆಗೆ ಪಿಚ್ಚಿಂಗ್, ಹೂಳೆತ್ತುವ ಅಗತ್ಯವಿದೆ. ಬಾಂದಾರದ ಹೂಳೆತ್ತಲು ಗ್ರಾಪಂನಿಂದ ಉದ್ಯೋಗ ಖಾತ್ರಿ ಯೋಜನೆಯಡಿ ₹4 ಲಕ್ಷ ಅನುದಾನ ಇಡಲಾಗಿದೆ ಎನ್ನಲಾಗುತ್ತಿದೆ. ಆದರೆ, ಹೊರಗೆ ದಿನಗೂಲಿ ಹೆಚ್ಚಳ ಇರುವುದರಿಂದ ಈ ಕಾಮಗಾರಿ ಉದ್ಯೋಗಕ್ಕೆ ಜನರು ಬರುವುದು ಸಾಧ್ಯತೆ ಕಡಿಮೆ. ಅದಕ್ಕಾಗಿ ಬಾಂದಾರದ ಹೂಳನ್ನು ಸರ್ಕಾರ ನೇರವಾದ ಅನುದಾನ ಬಿಡುಗಡೆ ಮಾಡುವ ಮೂಲಕ ಈ ಕಾರ್ಯ ಕೈಗೊಳ್ಳಬೇಕಿದೆ.

ಗೋಮಾಳದಲ್ಲಿ ಮಾಜಿ ಶಾಸಕ ಎಸ್.ಎಂ.ದೇಸಾಯಿ ಅವಧಿಯಲ್ಲಿ 2005ರಲ್ಲಿ ಜಿನುಗು ಕೆರೆ ಮಂಜೂರಾಗಿತ್ತು. ಕೆಲ ದಿನಗಳಲ್ಲಿ ಸರ್ಕಾರ ಬಿದ್ದು ಹೋದ ಪರಿಣಾಮ ಈ ಕೆಲಸ ಇದುವರೆಗೂ ಆಗಿಲ್ಲ.

### ಕೆರೆ ನಿರ್ಮಾಣ ಮಾಡದಿದ್ದರೇ ಹೋರಾಟ

ಗೋಮಾಳದಲ್ಲಿ ಸರ್ಕಾರ ಕೆರೆ ನಿರ್ಮಾಣ ಮಾಡಿದರೆ ಸುಮಾರು 2 ಸಾವಿರ ಎಕರೆ ಜಮೀನು ನೀರಾವರಿಗೆ ಒಳಪಡಲಿದೆ. ಅಲ್ಲದೇ ನಾಗೂರ ಗ್ರಾಮಕ್ಕೆಂದಿಗೂ ನೀರಿನ ಸಮಸ್ಯೆ ಉಂಟಾಗಲ್ಲ. ಒಂದು ವೇಳೆ ಸರ್ಕಾರ ಕೆರೆ ನಿರ್ಮಾಣ ಮಾಡಲು ಮುಂದಾಗದೇ ಹೋದರೆ ಪಕ್ಷಾತೀತವಾಗಿ ರೈತರು ವಂತಿಗೆ ಹಣದಿಂದ ಕೆರೆ ನಿರ್ಮಾಣ ಮಾಡಲು ತಯಾರು ಇದ್ದಾರೆ. ಇದಕ್ಕೆ ಸರ್ಕಾರ ಅವಕಾಶ ಕೊಡದೆ ಕೂಡಲೇ ಕೆರೆ ನಿರ್ಮಾಣ ಮಾಡಲು ಮುಂದಾಗಬೇಕು. ಇಲ್ಲದೇ ಹೋದರೆ ಹೋರಾಟಕ್ಕೂ ಮುಂದಾಗಬೇಕಾಗುತ್ತದೆ ಎಂದು ಗ್ರಾಮಸ್ಥರಾದ ಬಂದೇನವಾಜ ವಾಲೀಕಾರ, ರೇವಣಸಿದ್ದ ನಂದಿಹಾಳ, ಶಿವಾನಂದ ಡೋಣೂರ, ಸುರೇಶ ಲಮಾಣಿ, ನೇಮು ಲಮಾಣಿ, ಬಾಬು ನಂದಿಹಾಳ, ಶಿವಪ್ಪ ಹಚ್ಯಾಳ, ಶಿವಪ್ಪ ನಿಡಗುಂದಿ, ಇಬ್ರಾಹಿಂ ಚಪ್ಪರಬಂದ ಎಚ್ಚರಿಕೆ ನೀಡಿದ್ದಾರೆ.

**ತಾಲೂಕಿನ ನಾಗೂರ ಗ್ರಾಮದ 27 ಎಕರೆ ಗೋಮಾಳದಲ್ಲಿ 4 ಎಕರೆ ಪ್ರೌಢಶಾಲೆಗೆ, 3.20 ಎಕರೆ ಎಸ್ಸಿ, ಎಸ್ಟಿ ಬಾಂಧವರಿಗೆ ಆಶ್ರಯ ಮನೆ ನಿರ್ಮಿಸಲು, 15 ಎಕರೆ ಜವಳಿ ಪಾರ್ಕ್ ನಿರ್ಮಿಸಲು ಮಂಜೂರಾಗಿದೆ. ಜವಳಿ ಪಾರ್ಕ್ ಆರಂಭದ ಕುರಿತು ನಮಗೆ ಇದುವರೆಗೂ ಮಾಹಿತಿ ಬಂದಿಲ್ಲ. ಇಲ್ಲಿನ ಜನರು ಕೆರೆಗೆ ಬೇಡಿಕೆ ಇಟ್ಟಿರುವ ಬಗ್ಗೆ ನನಗೆ ಮಾಹಿತಿ ಇಲ್ಲ.**

• **ವೈ.ಎಸ್.ಸೋಮನಕಟ್ಟಿ** ತಹಸೀಲ್ದಾರರು, ಬಸವನಬಾಗೇವಾಡಿ.

**ಗೋಮಾಳದಲ್ಲಿ ಜವಳಿ ಪಾರ್ಕ್ ನಿರ್ಮಾಣದ ಬಗ್ಗೆ ಗ್ರಾಪಂಗೆ ಮಾಹಿತಿಯಿಲ್ಲ. ಈ ಜಾಗವು ತಹಸೀಲ್ದಾರ ವ್ಯಾಪ್ತಿಯಲ್ಲಿ ಬರುವುದರಿಂದಾಗಿ ನಮಗೆ ಅಷ್ಟಾಗಿ ಮಾಹಿತಿಯಿಲ್ಲ. ಈ ಜಾಗದಲ್ಲಿ ಸರ್ಕಾರಿ ಪ್ರೌಢಶಾಲೆ, ಎಸ್ಸಿ ಹಾಗೂ ಎಸ್ಟಿ ಜನಾಂಗದವರಿಗೆ ಆಶ್ರಯ ಮನೆ ಕಟ್ಟಲು ಜಾಗ ಮಂಜೂರಾಗಿದೆ ಎಂಬುವದು ಮಾತ್ರ ತಿಳಿದು ಬಂದಿದೆ.**

• **ಎಸ್.ವೈ.ಕುಂಬಾರ,** ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಣ್ಣೂರ ಗ್ರಾಪಂ

# ರಾಜ್ಯಮಟ್ಟದ 4ನೇ ಬೃಹತ್ ರೈತ ಜಾಗೃತಿ ಸಮಾವೇಶ ಯಶಸ್ವಿಗೊಳಿಸಿ



• **ಕನ್ನಡಪ್ರಭ ವಾರ್ತೆ** ದೇವರಹಿಪ್ಪರಗಿ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದಿಂದ ಮೇ 8ರಂದು ವಿಜಯಪುರ ನಗರದಲ್ಲಿ ಜರುಗಲಿರುವ ರಾಜ್ಯಮಟ್ಟದ 4ನೇ ಬೃಹತ್ ರೈತ ಜಾಗೃತಿ ಸಮಾವೇಶಕ್ಕೆ ದೇವರಹಿಪ್ಪರಗಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಮಹಿಳೆಯರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ರೈತ ಸಂಘದ ತಾಲೂಕು ಘಟಕದ ಅಧ್ಯಕ್ಷ ಈರಪ್ಪ ಕುಳೆಕುಮಟಗಿ ಹೇಳಿದರು.

ತಾಲೂಕಿನ ಜಾಲವಾದ, ಮಣೂರ, ದೇವೂರ ಸೇರಿ ವಿವಿಧ ಗ್ರಾಮಗಳಲ್ಲಿ ಮಂಗಳವಾರ ಸಂಚರಿಸಿ ರೈತ ಜಾಗೃತಿ ಸಮಾವೇಶದ ಕುರಿತು ಮಾತನಾಡಿದ ಅವರು, ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ನೇತೃತ್ವದಲ್ಲಿ ಕಬ್ಬು, ಈರುಳ್ಳಿ ಬೆಳೆಗಾರರ ಸೇರಿ ರೈತರ ಜ್ವಲಂತ ಸಮಸ್ಯೆಗಳ ಕುರಿತು ಸಮಾವೇಶದಲ್ಲಿ ಸ್ವಾಮೀಜಿಗಳು, ರಾಜಕಾರಣಿಗಳು, ರೈತ ಮುಖಂಡರು ಬೆಳಕು ಚೆಲ್ಲಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ರೈತ ಸಂಘದ ಗೌರವಾಧ್ಯಕ್ಷ ಶಿವಾನಂದ ಹಿರೇಮಠ, ಜಿಲ್ಲಾ ಉಪಾಧ್ಯಕ್ಷ ಪ್ಯಾಟಿ, ಸಂಪತ್ ಜಮಾದಾರ, ಮಹಿಳಾ ಘಟಕದ ಅಧ್ಯಕ್ಷೆ ಚನ್ನಮ್ಮ ಮೈತ್ರಿ, ಉಪಾಧ್ಯಕ್ಷೆ ಶಕೀರಾ ಹೆಬ್ಬಾಳ, ಸಿದ್ದನಗೌಡ ಪಾಟೀಲ, ಹಣಮಂತ್ರಾಯಗೌಡ ಪಾಟೀಲ, ಕಾಶಿಪತಿ ಕುದರಿ, ಚಂದ್ರಕಾಂತ ಕುಂಬಾರ, ಕಾಶಿನಾಥ ಬಿರಾದಾರ ಸೇರಿ ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ರೈತರು ಹಾಜರಿದ್ದರು.

# ಮಕ್ಕಳಿಗೆ ಶಿಕ್ಷಣ ಕೊಡಿ: ಡಾ.ಮಕ್ಬೂಲ್

## ಎಸ್ಸೆಸ್ಸೆಲ್ಸಿ, ಪಿಯುಸಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಒಂದು ಹೊತ್ತು ಊಟ ಕಡಿಮೆ ಮಾಡಿದರೂ ಚಿಂತೆ ಇಲ್ಲ. ಆದರೆ, ನಿಮ್ಮ ಮಕ್ಕಳಿಗೆ ಶಿಕ್ಷಣ ಕೊಡಿ ಎಂದು ಮುಖ್ಯಮಂತ್ರಿಗಳ ಮಾಜಿ ಸಂಸದೀಯ ಕಾರ್ಯದರ್ಶಿ ಡಾ.ಮಕ್ಬೂಲ್ ಬಾಗವಾನ ಹೇಳಿದರು.

ನಗರ ಬಾಗವಾನ ಅಭಿವೃದ್ಧಿ ಜಮಾತ್ ಹಾಗೂ ಬಾಗವಾನ ಶೈಕ್ಷಣಿಕ, ಸಾಮಾಜಿಕ ಕ್ಷೇಮಾಭಿವೃದ್ಧಿ ಟ್ರಸ್ಟ್ ಆಡಿಯಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಇಂದು ಎಷ್ಟೇ ಬಡತನ ಅನುಭವಿಸಿದರೂ ಮಕ್ಕಳಿಗೆ ಶಿಕ್ಷಣ ನೀಡಿ. ಇಂದು ಉಚಿತ ಶಿಕ್ಷಣದ ಅನೇಕ ಅವಕಾಶಗಳಿದ್ದು, ಬಡತನ ನಿವಾರಣೆ ಸಾಧ್ಯವಾಗಲು ಮಕ್ಕಳು ಶಿಕ್ಷಣವಂತಾಗಬೇಕು ಎಂದರು.

ಮುಖ್ಯ ಅತಿಥಿ ಡಾ.ಯೂಸೂಫ್ ಚೌಧರಿ ಮಾತನಾಡಿ, ಬಾಗವಾನ ಸಮಾಜದ ಮಕ್ಕಳು ಶಿಕ್ಷಣದ ಬಗ್ಗೆ ಒಲವು ಬೆಳೆಸಿಕೊಳ್ಳಬೇಕು. ಪಾರಂಪರಿಕ ಉದ್ಯಮ ನಡೆಸುವ ಜವಾಬ್ದಾರಿ ನಿಭಾಯಿಸುವ ಜೊತೆಗೆ ಉನ್ನತ ಶಿಕ್ಷಣ ಪಡೆದು ಡಾಕ್ಟರ್, ಇಂಜಿನೀಯರ್, ನ್ಯಾಯವಾದಿಗಳಾಗಿ ಮಿಂಚಬೇಕು ಎಂದರು.

ಪಾಲಿಕೆ ಮಾಜಿ ಸದಸ್ಯ ಮೈನುದ್ದೀನ್ ಬೀಳಗಿ ಮಾತನಾಡಿ, ವಿಧವೆಯರ ಶ್ರೇಯೋಭಿವೃದ್ಧಿ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಟ್ರಸ್ಟ್ ಕೈಗೊಳ್ಳುತ್ತಿದೆ. ಶಿಕ್ಷಣ ಒದಗಿಸಲು ಸಂಕಷ್ಟ ಎದುರಿಸುವ ಬಡಕುಟುಂಬಗಳ ಮಕ್ಕಳಿಗೆ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ನೆರವಾಗಲಾಗುವುದು. ಸಮಾಜದ ಪ್ರಮುಖರು, ಉದ್ಯಮಿಗಳು ಕೈಜೋಡಿಸಬೇಕು ಎಂದರು. ಬಾಗವಾನ ಜಮಾತ್ ಅಧ್ಯಕ್ಷ ಅಲ್‌ಹಾಜ್ ಹನೀಫ್ ಮನಗೂಳಿ, ಮುಖಂಡರಾದ ಮೆಹಬೂಬಸಾಬ್ ಬಾಗವಾನ, ಡಾ.ಸಮೀರ ಚೌಧರಿ, ಅಲ್ಲಾಭಕ್ಷ ಇಲಕಲ್, ಝಾಕೀರ್ ಬಾಗವಾನ, ಫಾರೂಕ್ ಬಾಗವಾನ, ಜಾವೀದ್ ಬಾಗವಾನ, ಅಲ್ಲಾಭಕ್ಷ್ ಬಾಗವಾನ, ಕರೀಂ ಬಾಗವಾನ, ಫಾರೂಕ್ ಬಾಗವಾನ, ಸಲೀಂ ಮುಂಡೇವಾಡಿ, ಸಮೀರ್ ಚೌಧರಿ, ಯೂಸೂಫ್ ಚೌಧರಿ, ನಿಯಾಜ್ ಬಾಗವಾನ, ಆಸೀಫ್ ಬಾಗವಾನ, ಇಕ್ಬಾಲ್ ಬಾಗವಾನ, ಉಸ್ಮಾನ್ ಬೀಳಗಿ, ಅಲ್ತಾಫ್ ಬಾಗವಾನ, ತೌಸೀಫ್ ಬಾಗವಾನ, ಮೆಹಬೂಬ್ ಬಳಗಾನೂರ, ಇಸಾಕ್ ಬಾಗವಾನ, ಲಾಡಜಿಸಾಬ್ ಕೊಲ್ಹಾರ, ಡಾ.ಆಸೀಫ್ ಇಕ್ಬಾಲ್ ದೊಡಮನಿ, ಇಸಾಕ್ ಬಾಗವಾನ, ರವೂಫ್ ಬಾಲಸಿಂಗ್, ಆಲೀಮಾ, ಎಸ್.ಆರ್.ಕೆರೂರ, ತಹಸೀನ್ ಗುಣಕಿ, ಫರೀದಾ ಬಾಗವಾನ, ವಹೀದಾಬಾನು ಬೀಳಗಿ ಉಪಸ್ಥಿತರಿದ್ದರು.




ಬಿಡುಗಡೆ... ಕಳೆದ ವರ್ಷದ ವಾರ್ಷಿಕ ಸಾಲ ಯೋಜನೆಯ ಶೇ.10.90 ಪಟ್ಟು ಹೆಚ್ಚಿನ ಗುರಿ

# 16,367 ಕೋಟಿ ವಾರ್ಷಿಕ ಸಾಲ ಯೋಜನೆ ಬಿಡುಗಡೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಜಿಲ್ಲೆಯ ಆರ್ಥಿಕ ಪ್ರಗತಿಗೆ ಪೂರಕವಾಗಿರುವ 2026-2027ನೇ ಹಣಕಾಸು ವರ್ಷದ ಜಿಲ್ಲಾ ವಾರ್ಷಿಕ ಸಾಲ ಯೋಜನೆಯನ್ನು ಬುಧವಾರ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಬಿಡುಗಡೆ ಮಾಡಲಾಯಿತು. ಜಿಲ್ಲೆಯ ಅಗ್ರಣೀಯ ಬ್ಯಾಂಕ್ ಆಗಿರುವ ಕೆನರಾ ಬ್ಯಾಂಕ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಈ ಸಾಲಿನ ವಾರ್ಷಿಕ ಸಾಲ ಯೋಜನೆ ಕೈಪಿಡಿ ಬಿಡುಗಡೆಗೊಳಿಸಿದರು.

ಪ್ರಸಕ್ತ ವರ್ಷದ ಸಾಲ ಯೋಜನೆಯ ₹16,367.83 ಕೋಟಿ ವಿತರಣೆಯ ಗುರಿ ಹೊಂದಿದೆ. ಇದು ಕಳೆದ ವರ್ಷದ ವಾರ್ಷಿಕ ಸಾಲ ಯೋಜನೆಯ ಶೇ.10.90 ಪಟ್ಟು ಹೆಚ್ಚಿನ ಗುರಿಯಾಗಿದೆ. ಆದ್ಯತಾ ವಲಯಕ್ಕೆ ಒಟ್ಟು ಯೋಜನೆ ಶೇ:69.59 ರಷ್ಟು ಅಂದರೆ ₹11,389.96 ಕೋಟಿ ಮೀಸಲಿಡಲಾಗಿದೆ.

ಕೃಷಿ ವಲಯಕ್ಕೆ ಒಟ್ಟು ಯೋಜನೆ



ಶೇ.51.46 ರಷ್ಟು ಅಂದರೆ ₹8422.71 ಕೋಟಿ ಮೀಸಲಿಡಲಾಗಿದೆ. ಉದ್ಯಮಿ ವಲಯಕ್ಕೆ ಒಟ್ಟು ಯೋಜನೆ ಯೋಜನೆಯ ಶೇ.16.90 ಅಂದರೆ ₹2765.48 ಕೋಟಿ ಮೀಸಲಿಡಲಾಗಿದೆ. ಶಿಕ್ಷಣ ಸಾಲ ₹53.43 ಕೋಟಿ, ವಸತಿ ಸಾಲ ₹94.07 ಕೋಟಿ ಮತ್ತು ಇತರೆ ಸಾಲ ₹28.84 ಕೋಟಿ ಸಾಲದ ಗುರಿ ಹೊಂದಲಾಗಿದೆ.

ಅಗ್ರಣಿ ಬ್ಯಾಂಕ್ ಮುಖ್ಯ ಪ್ರಬಂಧಕ ಕೆ. ಸಿದ್ದಯ್ಯ ಅವರು ಕಳೆದ ಸಾಲಿನ ವಾರ್ಷಿಕ ಯೋಜನೆಯ ಪ್ರಗತಿಯ ಅಂಕಿ ಅಂಶಗಳನ್ನು ತಿಳಿಸಿ ಸಾಲ ಮತ್ತು ಠೇವಣಿಯ ಅನುಪಾತ ಶೇ.106 ಆಗಿದ್ದು, ಅತ್ಯುತ್ತಮ ಗುರಿ ಸಾಧನೆ ಎಂದು ತಿಳಿಸಿದರು.

ಈ ವೇಳೆ ನಾಬಾರ್ಡ್ ಡಿಡಿ ವಿಕಾಸ ರಾಠೋಡ, ಕೆನರಾ ಬ್ಯಾಂಕ್ ವಿಭಾಗಿಯ ಪ್ರಬಂಧಕ ದೀಪಕಕುಮಾರ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಅಶೋಕ ಸೋಂಗರಿ, ಮುಖ್ಯ ವ್ಯವಸ್ಥಾಪಕ ವಿ.ಬಿ.ಕುಲಕರ್ಣಿ, ಎಸ್‌ಬಿಐ ಮುಖ್ಯ ವಸ್ಥಾಪಕ ಹರೀಶ ನಾಯಕ, ವಿನೋದ ಮಾದರ, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಪ್ರಬಂಧಕ ಅನಿಲ ಮಹಾಂಕಾಳಿ, ಡಿಸಿಸಿ ಬ್ಯಾಂಕ್ ಪ್ರಬಂಧಕ ರಮೇಶ ಹಿಟ್ನಹಳ್ಳಿ, ಐಸಿಐಸಿಐ ಬ್ಯಾಂಕ್ ಪ್ರಬಂಧಕ ಶಿವಪುತ್ರ ನಿಂಬಾಳ, ಸೂರ್ಯೋದಯ ಎಸ್‌ಎಫ್‌ಬಿ ಪ್ರಬಂಧಕ ಪ್ರದೀಪ, ಕೋಟಕ್ ಮಹೀಂದ್ರಾ ಬ್ಯಾಂಕ್ ಪ್ರಬಂಧಕ ರವೀಂದ್ರ ಅಂಗಡಿ ಸೇರಿದಂತೆ ವಿವಿಧ ಬ್ಯಾಂಕುಗಳ ಜಿಲ್ಲಾ ಸಂಯೋಜಕರು ಮತ್ತು ಲೈನ್ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಬ್ಯಾಂಕುಗಳು ಸಕಾಲದಲ್ಲಿ ಮೇಲಾಧಾರ ರಹಿತ ಸಣ್ಣ ಸಾಲುಗಳನ್ನು ನಿರುದ್ಯೋಗಿಗಳಿಗೆ ಕೊಟ್ಟರೇ ನಿರುದ್ಯೋಗ ನಿರ್ಮೂಲನೆಗೆ ಸಹಕಾರಿಯಾಗುವುದು.**

• **ರಿಷಿ ಆನಂದ** ಜಿಪಂ ಸಿಇಒ.

# ಸಿಲಿಂಡರ್, ಆಟೋ ಎಲ್‌ಪಿಜಿ ದರ ಏರಿಕೆಗೆ ಖಂಡನೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕೇಂದ್ರ ಸರ್ಕಾರವು ವಾಣಿಜ್ಯ ಗ್ಯಾಸ್ ಸಿಲಿಂಡರ್ ಹಾಗೂ ಆಟೋ ಎಲ್‌ಪಿಜಿ ದರಗಳನ್ನು ನಿರಂತರವಾಗಿ ಹೆಚ್ಚಿಸುತ್ತಿರುವ ಕ್ರಮ ಖಂಡಿಸಿ ಆಮ್ ಆದ್ಮಿ ಪಾರ್ಟಿ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಆಮ್ ಆದ್ಮಿ ಪಾರ್ಟಿ ಜಿಲ್ಲಾಧ್ಯಕ್ಷ ಭೋಗೇಶ ಸೋಲಾಪುರ ಮಾತನಾಡಿ, ದರ ಏರಿಕೆಯನ್ನು ಪಂಚ್ ರಾಜ್ಯಗಳ ಚುನಾವಣೆ ಮುಗಿದ ಮರುದಿನವೇ ಕೇಂದ್ರ ಸರ್ಕಾರ ಬಡಜನರ ಮೇಲೆ ಚಾಟಿ ಏಟು ಬೀಸಿದೆ. ಸಾಮಾನ್ಯ ಜನರ ಬದುಕಿನ ಮೇಲೆ ಭಾರೀ ಹೊರೆ ಹಾಕಿದ್ದು, ಸಣ್ಣ ವ್ಯಾಪಾರಿಗಳು, ಹೋಟೆಲ್ ಉದ್ಯಮಿಗಳು ಹಾಗೂ ಆಟೋ ಚಾಲಕರನ್ನು ಸಂಕಷ್ಟದ ಅಂಚಿಗೆ ತಳ್ಳಿದೆ ಎಂದು ದೂರಿದರು.

ಈಗಾಗಲೇ ದುಬಾರಿ ಬದುಕಿನ ಹೊರೆ ಹೊತ್ತಿರುವ ಜನರಿಗೆ ಈ ದರ ಏರಿಕೆ ಮತ್ತಷ್ಟು ಸಂಕಷ್ಟ ತಂದೊಡ್ಡಿದೆ. ಆಟೋ ಚಾಲಕರು ದಿನನಿತ್ಯದ ಆದಾಯದಿಂದಲೇ ಜೀವನ ಸಾಗಿಸುವ ಪರಿಸ್ಥಿತಿಯಲ್ಲಿ ಇಂತಹ ದರ ಏರಿಕೆ ಅವರ ಜೀವನವನ್ನು ಅಸ್ತವ್ಯಸ್ತಗೊಳಿಸಿದೆ. ಹೋಟೆಲ್ ಮತ್ತು ಸಣ್ಣ ಉದ್ಯಮಗಳು ನಷ್ಟದ ದಾರಿಯಲ್ಲಿ ಸಾಗುತ್ತಿದ್ದು, ಉದ್ಯೋಗ ಕಳೆದುಕೊಳ್ಳುವ ಭೀತಿ ಹೆಚ್ಚುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ವೇಳೆ ವಾಣಿಜ್ಯ ಗ್ಯಾಸ್ ಸಿಲಿಂಡರ್ ದರವನ್ನು ತಕ್ಷಣ ಕಡಿಮೆ ಮಾಡಬೇಕು. ಆಟೋ ಎಲ್‌ಪಿಜಿ ದರವನ್ನು ಹಿಂಪಡೆಯಬೇಕು. ಸಣ್ಣ ವ್ಯಾಪಾರಿಗಳು ಮತ್ತು ಆಟೋ ಚಾಲಕರಿಗೆ ವಿಶೇಷ ಸಬ್ಸಿಡಿ ನೀಡಬೇಕು. ಇಂಧನ ದರ ನಿಯಂತ್ರಣಕ್ಕೆ ಸ್ಪಷ್ಟ ನೀತಿ ಜಾರಿಗೊಳಿಸಬೇಕು ಎಂದು ಆಪ್ ಬೇಡಿಕೆ ಸಲ್ಲಿಸಿತು.

ಈ ಸಂದರ್ಭದಲ್ಲಿ ಜಿಲ್ಲಾ ಮಾಧ್ಯಮ ಉಸ್ತುವಾರಿ ಸಂಜು ಶೆಟಗಾರ, ಮುಖಂಡರಾದ ಪ್ರಕಾಶ ಸಬರದ, ಕಿರಣ ಮೇಲಿನಕೇರಿ, ಸುಶೀಲಾ ಮಿಣಜಗಿ, ಜ್ಯೋತಿ ಮಿಣಜಗಿ ಉಪಸ್ಥಿತರಿದ್ದರು.



ವಾಣಿಜ್ಯ ಗ್ಯಾಸ್ ಸಿಲಿಂಡರ್ ಹಾಗೂ ಆಟೋ ಎಲ್‌ಪಿಜಿ ದರ ಏರಿಕೆ ಖಂಡಿಸಿ ಕೇಂದ್ರಕ್ಕೆ ಆಪ್ ಮನವಿ

ಶಿಕ್ಷಣ ಎಂಬುವುದು ಹುಲಿಯ ಹಾಲಿನಂತೆ. ಅದನ್ನು ಕುಡಿದವರು ಘರ್ಜಿಸಲೇ ಬೇಕು. ಶಿಕ್ಷಣ ಎಂಬ ಮಹಾಸಾಗರದಲ್ಲಿ ಈಜಿ ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸು ಪಡೆಯಬೇಕು.
• **ಡಾ.ಅಶೋಕಕುಮಾರ ಜಾಧವ**
ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕರು.



# ವಿಷ ಪದಾರ್ಥ ಸೇವನೆಗೆ ಯತ್ನಿಸಿದ ರೈತನಿಗೆ ಚಿಕಿತ್ಸೆ

## ಅಧಿಕಾರಿಗಳು, ಗ್ರಾಮಸ್ಥರ ಸಮ್ಮುಖದಲ್ಲಿ ವಿಷ ಸೇವನೆಗೆ ಯತ್ನ: ಡಿಸಿ ಆನಂದ



### ಏನಿದು ಘಟನೆ?

ಕೂಡಗಿ ಎನ್‌ಟಿಪಿಸಿಯಿಂದ ಮಹಾರಾಷ್ಟ್ರದ ಪುಣೆಗೆ ಹೋಗುವ ವಿದ್ಯುತ್ ಲೈನ್‌ನ ಕಂಬವನ್ನು ಜಮೀನಿನಲ್ಲಿ ಅಳವಡಿಸುವ ಬೃಹತ್ ವಿದ್ಯುತ್ ಕಂಬಕ್ಕೆ ಹೆಚ್ಚಿನ ಪರಿಹಾರ ಕೊಡಬೇಕೆಂದು ಆಗ್ರಹಿಸಿ ರೈತನೋರ್ವ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಜಿಲ್ಲೆಯ ಕೊಲ್ಹಾರ ತಾಲೂಕಿನ ತಳೇವಾಡ ಗ್ರಾಮದ ಜಮೀನಿನಲ್ಲಿ ಬುಧವಾರ ಸಂಜೆ ನಡೆದಿದೆ. ಸ್ಥಳದಲ್ಲಿದ್ದ ಅಧಿಕಾರಿಗಳು ಹಾಗೂ ಪೊಲೀಸರ ಎದುರೇ ರೈತ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದು, ವಿಷ ಸೇವಿಸಿದ ರೈತನಿಗೆ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ತಳೇವಾಡ ಗ್ರಾಮದ ರೈತ ಮಲ್ಲನಗೌಡ ಬಿರಾದಾರ ಎಂಬ ರೈತ ವಿಷ ಸೇವಿಸಿ, ಚಿಕಿತ್ಸೆ ಪಡೆಯುತ್ತಿದ್ದಾನೆ. ಜಮೀನಿನಲ್ಲಿ ವಿದ್ಯುತ್ ಕಂಬ ಹಾಕಲು 3 ಗುಂಟೆ ಜಮೀನು ಬಳಕೆಯಾಗುವುದರಿಂದ ಅದಕ್ಕೆ ಸೂಕ್ತ ಪರಿಹಾರ ಕೊಡುವ ವ್ಯವಸ್ಥೆಯನ್ನು ಡಬ್ಲ್ಯುಆರ್ ಎಸ್ ಕಂಪನಿ ಅಧಿಕಾರಿಗಳು ಮಾಡಿದ್ದರು. ಆದರೆ ಇನ್ನೂ ಹೆಚ್ಚಿನ ಪರಿಹಾರ ಕೊಡಬೇಕು ಎಂದು ರೈತ ಮಲ್ಲನಗೌಡ ಬಿರಾದಾರ ಒತ್ತಾಯಿಸಿದ್ದನು. ಜಿಲ್ಲಾಸ್ಪತ್ರೆಗೆ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಭೇಟಿ ನೀಡಿ, ಆರೋಗ್ಯ ವಿಚಾರಿಸಿದ್ದಾರೆ.

• **ಕನ್ನಡಪ್ರಭ ವಾರ್ತೆ** ವಿಜಯಪುರ

ಟವರ್ ನಿರ್ಮಾಣ ಕಾಮಗಾರಿ ಆರಂಭಿಸಲು ಅಧಿಕಾರಿಗಳು ಜಮೀನಿಗೆ ತೆರಳಿದಾಗ ಅಧಿಕಾರಿಗಳು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ವಿಷ ಪದಾರ್ಥ ಸೇವಿಸಲು ಯತ್ನಿಸಿದ ಜಮೀನಿನ ಮಾಲೀಕನಿಗೆ ಸೂಕ್ತ ಚಿಕಿತ್ಸೆ ಹಾಗೂ ನಿಗಾವಹಿಸಲಾಗಿದೆ ಎಂದು ಡಿಸಿ ಡಾ.ಆನಂದ.ಕೆ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಇಂಧನ ಇಲಾಖೆಯ ವ್ಯಾಪ್ತಿಯಕೇಂದ್ರೀಯವಿದುಚ್ಛಕ್ತಿಪ್ರಾಧಿಕಾರದಡಿ ಬರುವ ನರೇಂದ್ರ ಹೊಸ ಸ್ವೀಕರಣಾ (ಕೂಡಗಿ) ಕೇಂದ್ರದಿಂದ ಪುಣೆ (ಜಿಐಎಸ್) ಸ್ವೀಕರಣಾ ಕೇಂದ್ರದವರೆಗೆ 765 ಕೆ.ವಿ. ಪ್ರಸರಣ ಮಾರ್ಗ ನಿರ್ಮಿಸುವ ಕಾಮಗಾರಿಗೆ ನಡೆದಿತ್ತು. ಈ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ಬಸವನ ಬಾಗೇವಾಡಿ, ಬಬಲೇಶ್ವರ, ತಿಕೋಟಾ ಹಾಗೂ ಕೋಲಾರ ತಾಲೂಕುಗಳಲ್ಲಿ ಟವರ್ ನಿರ್ಮಾಣ ಹಾಗೂ ವಿದ್ಯುತ್ ತಂತಿ ಅಳವಡಿಸುವ ಕಾಮಗಾರಿಗಳು ನಡೆಯುತ್ತಿವೆ. ಒಟ್ಟು 177 ಸ್ಥಳಗಳಲ್ಲಿ ಟವರ್ ನಿರ್ಮಾಣದ ಅಡಿಪಾಯ ಕಾಮಗಾರಿಗಳನ್ನು ಗುರುತಿಸಲಾಗಿದ್ದು, ಅವುಗಳಲ್ಲಿ 168 ಸ್ಥಳಗಳಲ್ಲಿ ಟವರ್‌ನಿರ್ಮಾಣದಅಡಿಪಾಯಕಾಮಗಾರಿಗಳು ಸಂಪೂರ್ಣವಾಗಿ ಮುಗಿದಿವೆ. ಉಳಿದ ಸ್ಥಳಗಳಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.

ಕೊಲ್ಹಾರ ತಾಲೂಕಿನ ತಳೇವಾಡ ಗ್ರಾಮದಲ್ಲಿ ಸ.ನಂ.161/2 ರಲ್ಲಿ ಮಲ್ಲನಗೌಡ ಹಣಮಂತಗೌಡ ಬಿರಾದಾರ ಅವರ ಜಮೀನಿನಲ್ಲಿ ಸುಮಾರು ಎರಡೂವರೆ ಗುಂಟೆಯಲ್ಲಿ ಟವರ್ ಕಾರಿಡಾರ್ ನಿರ್ಮಾಣಕ್ಕಾಗಿ ನಿಯಮಾನುಸಾರ ₹8,96,236ಪರಿಹಾರಧನನಿಗದಿಪಡಿಸಲಾಗಿತ್ತು. ಟವರ್ ನಿರ್ಮಾಣ ಅಡಿಪಾಯ ಕಾಮಗಾರಿಯೂ ಮುಗಿದಿತ್ತು. ಹೀಗಾಗಿ ಬುಧವಾರ ಮಧ್ಯಾಹ್ನ 1 ಗಂಟೆಗೆ ಟವರ್ ನಿರ್ಮಾಣದ ಕಾಮಗಾರಿ ಆರಂಭಿಸಲು ಅಧಿಕಾರಿಗಳು ಜಮೀನಿಗೆ ತೆರಳಿದ್ದರು. ಈ ವೇಳೆ ಜಮೀನಿನ ಮಾಲೀಕ ಅಧಿಕಾರಿಗಳೊಂದಿಗೆ ಸಹಕರಿಸುವ ಬದಲಿಗೆ ಅವರ ಸಮ್ಮುಖದಲ್ಲಿ ವಿಷ ಪದಾರ್ಥ ಸೇವನೆಗೆ ಯತ್ನಿಸಿದ್ದರು. ಅವರಿಗೆ ಜಿಲ್ಲಾಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಹಾಗೂ ನಿಗಾವಹಿಸಲಾಗಿದೆ ಎಂದು ತಿಳಿಸಿದ್ದಾರೆ.

# ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಆತ್ಮವಿಶ್ವಾಸದೊಂದಿಗೆ ಮುನ್ನಡೆಯಿರಿ

## ವಾರ್ಷಿಕ ಸ್ನೇಹ ಸಮ್ಮೇಳದಲ್ಲಿ ಡಾ.ಅಶೋಕಕುಮಾರ ಜಾಧವ ಸಲಹೆ



• **ಕನ್ನಡಪ್ರಭ ವಾರ್ತೆ** ವಿಜಯಪುರ

ಶಿಕ್ಷಣ ಎಂಬುವುದು ಹುಲಿಯ ಹಾಲಿನಂತೆ. ಅದನ್ನು ಕುಡಿದವರು ಘರ್ಜಿಸಲೇ ಬೇಕು. ಶಿಕ್ಷಣ ಎಂಬ ಮಹಾಸಾಗರದಲ್ಲಿ ಈಜಿ ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸು ಪಡೆಯಬೇಕು ಎಂದು ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ಡಾ.ಅಶೋಕಕುಮಾರ ಜಾಧವ ಅಭಿಪ್ರಾಯಪಟ್ಟರು.

ನಗರದ ಪ್ರತಿಷ್ಠಿತ ವಿದ್ಯಾಸಂಸ್ಥೆ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ಅಂಜುಮನ್ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಸುವರ್ಣ ಸಂಭ್ರಮದ ವಾರ್ಷಿಕ ಸ್ನೇಹ ಸಮ್ಮೇಳನದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಸ್ಪರ್ಧಾತ್ಮಕ ಯುಗದಲ್ಲಿ ಆತ್ಮವಿಶ್ವಾಸದೊಂದಿಗೆ ದೈಹಿಕ ಮತ್ತು ಮಾನಸಿಕ ಧೃಡತೆಯೊದಿಗೆ ಮುನ್ನಡೆಯುವಂತಾಗಬೇಕು ಎಂದು ಸಲಹೆ ನೀಡಿದರು.

ಪ್ರಾಚಾರ್ಯ ಡಾ.ಎಸ್.ಜೆ.ಜಹಗೀರದಾರ್ ಅಧ್ಯಕ್ಷೀಯ ಪರ ನುಡಿಗನ್ನಾಡಿದ ಅವರು, ಮಹಾವಿದ್ಯಾಲಯ ಸುವರ್ಣಮಹೋತ್ಸವ ಹೊಸ್ತಿಲು ದಾಟಿ ಸಾಧನೆಯ ಹಾದಿಯಲ್ಲಿ ಸಾಗುತ್ತಿದೆ. ಮಹಾವಿದ್ಯಾಲಯ ವಿದ್ಯಾರ್ಥಿಗಳು ನಾಡಿನಾದ್ಯಂತ ಉನ್ನತ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಮಹಾವಿದ್ಯಾಲಯ ಶೈಕ್ಷಣಿಕ ಪ್ರಗತಿ ಮತ್ತು ಸಮಾಜಮುಖಿ ಕಾರ್ಯ ವ್ಯಾಪ್ತಿಗೆ ಹಿಡಿದ ಕೈಗನ್ನಡಿಯಾಗಿದೆ. ವಿದ್ಯಾರ್ಥಿಗಳ ಭಾವಿ ಭವಿಷ್ಯತ್ತಿಗೆ ಒಳಿತಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ವಿಶ್ವವಿದ್ಯಾಲಯದ ಮಟ್ಟದಲ್ಲಿ ಸಾಧನೆಗೈದ ಸಾಧಕರು, ಚಿನ್ನದ ಪದಕ ವಿಜೇತರು ಮತ್ತು ರಾಜ್ಯ ಮತ್ತು ರಾಷ್ಟ್ರೀಯಮಟ್ಟದ ಕ್ರೀಡೆ ಮತ್ತ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ವಾರ್ಷಿಕ ಸ್ನೇಹ ಸಮ್ಮೇಳನ ವರದಿಯನ್ನು ಪ್ರೊ.ಅಜದ್ ಸಿದ್ದಿಕಿ ವಾಚಿಸಿದರು. ಐ.ಕ್ಯೂ.ಎ.ಸಿ ಸಂಯೋಜಕ ಪ್ರೊ. ಕೆ.ಎ.ನಿಶಾನಿ, ಕ್ರೀಡಾ ವಿಭಾಗ ಮುಖ್ಯಸ್ಥ ಆರೀಫ್ ಹುಸೇನ ಇನಾಮದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಾಂಸ್ಕೃತಿಕ ವೇದಿಕೆಯ ಮುಖ್ಯಸ್ಥ ಡಾ.ಸೈಯ್ಯದ್ ಅಲೀಮುಲ್ಲಾ ಹುಸೇನಿ ಸ್ವಾಗತಿಸಿದರು. ಕು.ಅಲೀನಾ ನವಾಬ್ ವಂದಿಸಿದರು. ಈ ವಾರ್ಷಿಕ ಸ್ನೇಹ ಸಮ್ಮೇಳದ ಯಶಸ್ಸಿಗಾಗಿ ಮಹಾವಿದ್ಯಾಲಯದ ಆಡಳಿ ಮಂಡಳಿಯ ಅಧ್ಯಕ್ಷ ಜನಾಬ್ ಸೈಯ್ಯದ್ ಮೆಹಮೂದ್ ಪೀರಾಂ ಪೀರಜಾದೆ, ಉಪಾಧ್ಯಕ್ಷ ಜನಾಬ್ ಸೈಯ್ಯದ್ ಜೈನುಲಾಬೆದೀನ್ ಪೀರಜಾದೆ ಹಾಶ್ಮೀ, ಅಂಜುಮನ್ ಪದವಿ ಪೂರ್ವ ಮಹಾವಿದ್ಯಾಲಯದ ಅಧ್ಯಕ್ಷ ಜನಾಬ್ ಇಮ್ತಿಯಾಜ್ ಖಾದ್ರಿ ಮುಶ್ರಿಫ್ ಹಾಗೂ ಸಂಸ್ಥೆಯ ಕಾರ್ಯದರ್ಶಿಗಳಾದ ಅಲ್ ಹಾಜ್ ಜನಾಬ್ ಅಬ್ದುಲ್ ಹಮೀದ್ ಅಥಣಿ ಮೊದಲಾದವರು ಶುಭ ಹಾರೈಸಿದರು.

# ಎಲ್ಲದಕ್ಕೂ ಕಾಂಗ್ರೆಸ್ ಹೈಕಮಾಂಡ್ ಸುಪ್ರೀಂ: ಸಚಿವ ಎಂಬಿಪಾ

• **ಕನ್ನಡಪ್ರಭ ವಾರ್ತೆ** ವಿಜಯಪುರ

ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರವನ್ನೆಲ್ಲ ಕಾಂಗ್ರೆಸ್ ಪಕ್ಷದ ವರಿಷ್ಠ ಮಂಡಳಿ ಸೋನಿಯಾಗಾಂಧಿ, ರಾಹುಲಗಾಂಧಿ, ಎಐಸಿಸಿ ಅಧ್ಯಕ್ಷರು ತೀರ್ಮಾನ ಮಾಡುತ್ತಾರೆ. ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ಸುಪ್ರೀಂ, ಕರ್ನಾಟಕದಲ್ಲೂ ಸುಪ್ರೀಂ, ತಮಿಳುನಾಡಿನಲ್ಲೂ ಸುಪ್ರೀಂ, ವೆಸ್ಟ್ ಬೆಂಗಾಲದಲ್ಲೂ ಸುಪ್ರೀಂ, ಎಲ್ಲ ಕಡೆ ಸುಪ್ರೀಂ. ಎಲ್ಲವನ್ನು ಹೈ ಕಮಾಂಡ್‌ದವರೇ ನಿರ್ಣಯ ಮಾಡುತ್ತಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಕರೆದರೆ ಹೋಗಲೇಬೇಕಾಗುತ್ತದೆ ಎಂದು ಸ್ವತಹ ಮುಖ್ಯಮಂತ್ರಿಗಳೇ ಹೇಳಿಕೆ ಕೊಟ್ಟಿದ್ದಾರೆ. ಹಾಗಾಗಿ ಎಲ್ಲದಕ್ಕೂ ಹೈಕಮಾಂಡ್ ಸುಪ್ರೀಂ. ಕೇರಳದಲ್ಲಿ ಸಿಎಂ ವೇಣುಗೋಪಾಲ ಆಗ್ತಾರಾ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿ, ವೇಣುಗೋಪಾಲ ಅವರು ಹೈ ಕಮಾಂಡ್‌ನ ಒಂದು ಭಾಗ. ಎಲ್ಲ ನಿರ್ಣಯವನ್ನು ಪಕ್ಷದ ವರಿಷ್ಠರು ಕೈಗೊಳ್ಳುತ್ತಾರೆ ಎಂದರು.

ಮಮತಾ ಬ್ಯಾನರ್ಜಿ ರಾಜೀನಾಮೆ ಕೊಡದ ವಿಚಾರವಾಗಿ ಮಾತನಾಡಿ, ಅದರ ಬಗ್ಗೆ ಕಾನೂನಾತ್ಮಕವಾಗಿ, ಸಂವಿಧಾನಾತ್ಮಕವಾಗಿ ಏನಾಗುತ್ತದೋ ಆಗುತ್ತದೆ ಅದನ್ನು ನೋಡೋಣ. ಅವರು ರಾಜೀನಾಮೆ ಕೊಡುವುದಿಲ್ಲ ಎಂಬುವು ಸಂವಿಧಾನದಲ್ಲಿ ಏನಿದೆಯೋ ಅದು ತೀರ್ಮಾನವಾಗಲಿದೆ. ಆದರೆ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯಿಂದ ಅವರಿಗೆ ಸಾಕಷ್ಟು ಅನ್ಯಾಯವಾಗಿರುವುದು ಸತ್ಯವಾಗಿದೆ. ಮಮತಾ ಅವರನ್ನು ಸೋಲಿಸಲು ಬಿಜೆಪಿಯವರು ಅಧಿಕಾರಿಗಳನ್ನಿಟ್ಟುಕೊಂಡು, ವಾಮ ಮಾರ್ಗಗಳಿಂದ ಜಯಗಳಿಸಿದ್ದಾರೆ ಎಂದರು.

> ನಗರದಲ್ಲಿ ಬೀದಿನಾಯಿ ದಾಳಿ ವಿಚಾರವಾಗಿ ನಿನ್ನೆಯೇ ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಅದಕ್ಕೆ ಶಾಶ್ವತವಾದ ಪರಿಹಾರಕ್ಕಾಗಿ ಚಿಂತಿಸಲಾಗುತ್ತಿದೆ. ಬೀದಿ ನಾಯಿಗಳಿಗೆ ಲಸಿಕೆ ಕೊಡುವುದು, ಸಂತಾನ ಹರಣ ಶಸ್ತ್ರಚಿಕಿತ್ಸೆ ಮಾಡಿಸುವುದು, ಅವುಗಳನ್ನು ಬೇರೆಡೆ ಶೆಲ್ಟರ್‌ನಲ್ಲಿರಿಸುವುದು ಸೇರಿದಂತೆ ಎಲ್ಲ ರೀತಿಯಿಂದ ಪರಹಾರ ಕೊಡುವ ಕೆಲಸ ಆಗಲಿದೆ.
> • **ಎಂ.ಬಿ.ಪಾಟೀಲ** ಸಚಿವರು.

ತಮಿಳುನಾಡಿನಲ್ಲಿ ಟಿವಿಕೆಗೆ ಕಾಂಗ್ರೆಸ್ ಬೆಂಬಲ ವಿಚಾರವಾಗಿ ಮಾತನಾಡಿ, ಕೆಲವು ಬಿಜೆಪಿಯಂತಹ ಕೋಮುವಾದಿ ಶಕ್ತಿಗಳನ್ನು ಅಲ್ಲಿನ ಜನರು ದೂರಿಟ್ಟಿದ್ದಾರೆ. ಪರ್ಯಾಯವಾಗಿ ಜ್ಯಾತ್ಯಾತೀತ ಹಿನ್ನೆಲೆಯಲ್ಲಿ ಬಂದಿರುವ ಟಿವಿಕೆಯ ಯುವಕ ವಿಜಯಗೆ ಜನ ಬಹುದೊಡ್ಡ ಮನ್ನಣೆ ಕೊಟ್ಟಿದ್ದಾರೆ. ಜನರ ತೀರ್ಪು ಹುಸಿಯಾಗಬಾರದು, ಜನರ ತೀರ್ಪಿಗೆ ನಾವು ತಲೆಬಾಗಬೇಕು ಎಂದರು.

ಕೋಮುವಾದಿ ಶಕ್ತಿಗಳಿಗೆ ವಿರುದ್ಧವಾಗಿ ಇಂದು ಟಿವಿಕೆನವರು ಗೆದ್ದಿದ್ದು, ಅವರನ್ನು ಬೆಂಬಲಿಸುವಲ್ಲಿ ನಾವು ವಿಫಲವಾದರೇ ಕೋಮುವಾದಿ ಶಕ್ತಿಗಳನ್ನು ಬೆಳೆಸಲು ಅವಕಾಶ ಕೊಟ್ಟಂತಾಗುತ್ತದೆ. ಹಾಗಾಗಿ ಟಿವಿಕೆಗೆ ಕಾಂಗ್ರೆಸ್ ಬೆಂಬಲ ಸಿಕ್ಕಿದೆ. ಟಿವಿಕೆ ಸರ್ಕಾರ ರಚನೆ ಮಾಡುವಲ್ಲಿ ನಾವು ಬೆಂಬಲ ಕೊಟ್ಟಿದ್ದೇವೆ. ಟಿವಿಕೆಗೆ ಬಂಬಲ ಕೊಡದಿದ್ದರೇ ಜನರು ನಮ್ಮನ್ನು ಕ್ಷಮಿಸುವುದಿಲ್ಲ. ನಾವು ಕಾಂಗ್ರೆಸ್‌ನವರು ಅವರಿಗೆ ಬೆಂಬಲಿಸದಿದ್ದರೆ ಜನರು ನಮ್ಮನ್ನು ತಪ್ಪಿತಸ್ಥರನ್ನಾಗಿ ಮಾಡುತ್ತಾರೆ. ಜನರ ತೀರ್ಪಿಗೆ ವಿರೋಧವಾಗಿ ಹೋಗುವುದು ಆಗಬಾರದು ಎಂದು ನಾವು ಟಿವಿಕೆಗೆ ಬೆಂಬಲ ಕೊಡುತ್ತಿದ್ದೇವೆ. ಎಲ್ಲೋ ಒಂದುಕಡೆ ನಮ್ಮ ತತ್ವಸಿದ್ಧಾಂತಕ್ಕೆ ವಿರೋಧಿಸಿದಂತಾಗುತ್ತದೆ. ಅದರರ್ಥ ಡಿಎಂಕೆಗೆ ನಾವು ಬೆನ್ನಿಗೆ ಚೂರಿ ಹಾಕಿದೆವು ಅಂತಲ್ಲ. ಡಿಎಂಕೆ ಪಕ್ಷದ ಜೊತೆಗೂ ಮಾತನಾಡುತ್ತೇವೆ ಎಂದರು.

ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ಕೊಡಬೇಕಾಗುತ್ತದೆ. ಪ್ರತಿವರ್ಷ ನಾವು ಆಲಮಟ್ಟಿ ಡ್ಯಾಂ ನಲ್ಲಿ ಜೂನ್ 15ರವರೆಗೆ ಲೆಕ್ಕಾಚಾರ ಹಾಕಿ ನೀರು ಕೊಡುತ್ತಿದ್ದೇವು. ಇದೀಗ ಪರಿಸ್ಥಿತಿ ಬದಲಾಗಬಹುದು, ನಾರ್ಮಲ್ ಆಗಿ ಮಳೆ ಬಂದರೆ ಜೂ.15ರವರೆಗೆಆಗುತ್ತದೆ. ಇಲ್ಲವಾದಲ್ಲಿ ಆ.15ರವರೆಗೆಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕಾಗುತ್ತದೆ. ಕೃಷಿಗಿಂತ ಮೊದಲು ನಾವು ಕುಡಿಯುವ ನೀರಿಗೆ ಆದ್ಯತೆ ಕೊಡಬೇಕಾಗುತ್ತದೆ ಎಂದರು.

ಪುಣೆಯಲ್ಲಿರುವ ಅದಾನಿ ಕಂಪನಿಗೆ ಜಿಲ್ಲೆಯ ಎನ್‌ಟಿಪಿಸಿಯಿಂದ ವಿದ್ಯುತ್ ಲೈನ್ ಹೊರಟಿದ್ದು, ರೈತರಿಗೆ ಸಮಸ್ಯೆಯಾಗುತ್ತಿರುವ ವಿಚಾರವಾಗಿ ಮಾತನಾಡಿ, ಅದು ಕೇಂದ್ರ ಸರ್ಕಾರದ ಯೋಜನೆ, ಕೇಂದ್ರದ ಆಕ್ಟ್ ಪ್ರಕಾರ ಕೊಡುವ ಪರಿಹಾರವನ್ನು 95 ಪರ್ಸೆಂಟ್ ರೈತರು ಒಪ್ಪಿಕೊಂಡಿದ್ದು, ಈ ಕುರಿತು ಜಿಲ್ಲಾಧಿಕಾರಿಗಳಿಗೆ ವಿವರವಾಗಿ ಮಾಹಿತಿ ಕೊಡುವಂತೆ ತಿಳಿಸಿದ್ದೇನೆ. ಕೆಲವರು ಬ್ಲಾಕಮೇಲ್ ಮಾಡುವ ತಂತ್ರ ಮಾಡುತ್ತಿದ್ದಾರೆ. ಈ ಬ್ಲಾಕಮೇಲ್ ಮಾಡುವ ತಂತ್ರ ನಿಲ್ಲಬೇಕು ಎಂದು ತಿಳಿಸಿದರು.